**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ರಮೇಶ್ ಬಾಬು, ಇವರು ನಿಯಮ 72ರಡಿ ಮಂಡಿಸಿರುವ ಗಮನ ಸೆಳೆಯುವ ಸೂಚನೆಗೆ ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖಾ ಸಚಿವರ ಉತ್ತರ**

**ವಿಷಯ**

ಕರ್ನಾಟಕ ರಾಜ್ಯ ಸರ್ಕಾರದ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ವತಿಯಿಂದ ಲಿಂಗತ್ವ ಅಲ್ಪಸಂಖ್ಯಾತರನ್ನು ಸಮಾಜದ ಮುಖ್ಯ ವಾಹಿನಿಯಲ್ಲಿ ತರುವ ಹಿನ್ನೆಲೆಯಲ್ಲಿ ರಾಜ್ಯ ಸರ್ಕಾರ 2017 ರಲ್ಲಿ ಕರ್ನಾಟಕದಲ್ಲಿ ಲಿಂಗತ್ವ ಅಲ್ಪಸಂಖ್ಯಾತರ ನೀತಿಯನ್ನು ಜಾರಿಗೆ ತಂದಿದೆ. ಲಿಂಗತ್ವ ಅಲ್ಪಸಂಖ್ಯಾತರಿಗೆ ಸಾಮಾಜಿಕ ಬದುಕಿನಲ್ಲಿ ಕಾರ್ಯಕ್ರಮಗಳನ್ನು ನೀಡುವ ಹಿನ್ನೆಲೆಯಲ್ಲಿ ದೇಶದಲ್ಲಿ ಪ್ರಥಮವಾಗಿ ಕರ್ನಾಟಕ ರಾಜ್ಯ ಸರ್ಕಾರ ಶೈಕ್ಷಣಿಕ, ಸಾಮಾಜಿಕ ಮತ್ತು ಆರ್ಥಿಕ ಸ್ಥಿತಿಗಳಿಗೆ ಅನುಗುಣವಾಗಿ ಸಮೀಕ್ಷೆಯನ್ನು ಮಾಡಿರುತ್ತದೆ. ಈ ಸಮೀಕ್ಷೆಯು ಅನೇಕ ಶಿಫಾರಸ್ಸುಗಳನ್ನು ರಾಜ್ಯ ಸರ್ಕಾರಕ್ಕೆ ನೀಡಿದ್ದು ಸಾಮಾಜಿಕವಾಗಿ ಅರಿವು ಮೂಡಿಸುವ ಕಾರ್ಯಕ್ರಮಗಳನ್ನು ಕಲ್ಪಿಸಲು, ಲಿಂಗತ್ವ ಅಲ್ಪಸಂಖ್ಯಾತರಿಗೆ ವಿದ್ಯಾರ್ಥಿ ನಿಲಯಗಳನ್ನು ಪೂರೈಸಲು, ಆರೋಗ್ಯ ಕಾರ್ಯಕ್ರಮಗಳನ್ನು ರೂಪಿಸಲು, ಖಾಸಗಿ ಕ್ಷೇತ್ರದಲ್ಲಿ ಉದ್ಯೋಗ ದೊರಕಿಸಲು, ಕೌಶಲ್ಯ ಅಭಿವೃದ್ಧಿ ಇಲಾಖೆ ಮೂಲಕ ತರಬೇತಿಗಳನ್ನು ನೀಡಲು, ವಸತಿ ಸೌಲಭ್ಯ ಕಲ್ಪಿಸಲು, ಸಾರ್ವಜನಿಕ ಸ್ಥಳಗಳಲ್ಲಿ ಪ್ರತ್ಯೇಕ ಶೌಚಾಲಯಗಳನ್ನು ನಿರ್ಮಿಸಲು, ಸರ್ಕಾರವು ಯೋಜನೆಗಳನ್ನು ರೂಪಿಸಲು ಭಿಕ್ಷಾಟನೆಯಲ್ಲಿ ತೊಡಗಿರುವವರಿಗೆ ಪುನರ್ ವಸತಿ ಕಲ್ಪಿಸಲು, ಅನೇಕ ಕಾರ್ಯಕ್ರಮಗಳನ್ನು ಜಾರಿಗೊಳಿಸಲು ರಾಜ್ಯ ಸರ್ಕಾರಕ್ಕೆ ಶಿಫಾರಸ್ಸು ಮಾಡಿರುತ್ತದೆ. ಈ ಸಮೀಕ್ಷೆಯ ಅನುಗುಣವಾಗಿ ರಾಜ್ಯದಲ್ಲಿ ಸುಮಾರು 4,735 ವಿವಾಹಿತರು, 5,444 ಅವಿವಾಹಿತರು ಇರುತ್ತಾರೆ. ರಾಜ್ಯದಲ್ಲಿ ಸುಮಾರು 10000ಕ್ಕೂ ಹೆಚ್ಚು ಲಿಂಗತ್ವ ಅಲ್ಪಸಂಖ್ಯಾತರು ಇರುವ ಮಾಹಿತಿಯಿಂದ/ವರದಿಯಿಂದ ದೊರೆತಿರುತ್ತದೆ. ಲಿಂಗತ್ವ ಅಲ್ಪಸಂಖ್ಯಾತರ ಸಮುದಾಯವನ್ನು ಸಮಾಜ ವಾಹಿನಿಯಲ್ಲಿ ತರುವುದು ಸರ್ಕಾರದ ಕರ್ತವ್ಯವಾಗಿದ್ದು ಇವರಿಗೆ ವರದಿಗೆ ಅನುಗುಣವಾಗಿ ಯೋಜನೆಗಳನ್ನು ರೂಪಿಸಿ ಸಮಾಜದ ವಾಹಿನಿಯಲ್ಲಿ ಬದುಕಲು ಅವಕಾಶ ಕಲ್ಪಿಸುವುದನ್ನು ರಾಜ್ಯ ಸರ್ಕಾರ ಮಾಡಬೇಕಾಗಿರುತ್ತದೆ. 26.02.2026 ರಂದು ಪ್ರಜಾವಾಣಿ ಪತ್ರಿಕೆಯು ಒಂದು ವಿಸ್ತಾರವಾದ ವರದಿಯನ್ನು ಈ ಸಂಬಂಧ ಪತ್ರಿಕೆಯಲ್ಲಿ ಪ್ರಕಟಿಸುತ್ತದೆ. ಈ ಸಮುದಾಯವನ್ನು ಸಮಾಜದ ವಾಹಿನಿಯಲ್ಲಿ ತರಲು ನ್ಯಾಯಾಲಯದ ತೀರ್ಪುಗಳು ಬಂದಿರುತ್ತದೆ. ಸಾಮಾಜಿಕ ಕಳಕಳಿ ಮತ್ತು ಮಾನವೀಯ ಮೌಲ್ಯಗಳ ಹಿನ್ನೆಲೆಯಲ್ಲಿ ರಾಜ್ಯ ಸರ್ಕಾರ ಲಿಂಗತ್ವ ಅಲ್ಪಸಂಖ್ಯಾತ ಸಮುದಾಯಗಳಿಗೆ ಪೂರಕವಾದ ಕಾರ್ಯಕ್ರಮಗಳನ್ನು ರೂಪಿಸಲು ರಾಜ್ಯ ಸರ್ಕಾರದ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯು ನಿರ್ದಿಷ್ಟ ಕಾಲಮಿತಿಯಲ್ಲಿ ಯೋಜನೆಯನ್ನು ಹಮ್ಮಿಕೊಳ್ಳಬೇಕಾಗಿದ್ದು, ಸಾರ್ವಜನಿಕ ಹಿತದೃಷ್ಟಿಯಿಂದ ಜರೂರಾಗಿ ಯೋಜನೆಯ ಸಮೀಕ್ಷೆಯ ವರದಿಯನ್ನು ಜಾರಿಗೊಳಿಸುವ ಕುರಿತು.

**ಉತ್ತರ**

1. ಕರ್ನಾಟಕ ರಾಜ್ಯದಲ್ಲಿ ನೇರ ನೇಮಕಾತಿಯಲ್ಲಿ ತೃತೀಯ ಲಿಂಗದ ಅಭ್ಯರ್ಥಿಗಳಿಗೆ ಶೇ.1ರಷ್ಟು ಸಮತಳ ಮೀಸಲಾತಿಯನ್ನು ಕಲ್ಪಿಸಿ ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 179 ಸೇನೆನಿ 2020, ದಿನಾಂಕ:14.07.2021 ರಲ್ಲಿ ಆದೇಶ ಹೊರಡಿಸಿರುತ್ತದೆ.
2. ಬೆಂಗಳೂರು ನಗರ ಜಿಲ್ಲೆಯ 179 ಲಿಂಗತ್ವ ಅಲ್ಪಸಂಖ್ಯಾತರಿಗೆ ವಸತಿ ಸೌಲಭ್ಯ ಕಲ್ಪಿಸಿ ಕೊಡಲು ರೂ.805.50 ಲಕ್ಷಗಳ ಅನುದಾನವನ್ನು ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮದ ಆದೇಶ ಸಂಖ್ಯೆ: ಮಅನಿ/ರಾ.ಗಾ.ವ.ನಿ.ನಿ./ವಸತಿ/05/2021-22, ದಿನಾಂಕ:-28-11-2023 ರನ್ವಯ ರಾಜೀವ್ ಗಾಂಧಿ ವಸತಿ ನಿಗಮ ನಿಯಮಿತ, ಬೆಂಗಳೂರು ಇವರಿಗೆ ಬಿಡುಗಡೆ ಮಾಡಲಾಗಿದೆ.

3. ವಿಜಯಪುರ ಜಿಲ್ಲೆಯ 50 ಲಿಂಗತ್ವ ಅಲ್ಪಸಂಖ್ಯಾತರಿಗೆ ವಸತಿ ಸೌಲಭ್ಯ ಕಲ್ಪಿಸಿ ಕೊಡಲು ರೂ.1,58,50,000/-ಗಳ ಅನುದಾನವನ್ನು ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮದ ಆದೇಶ ಸಂಖ್ಯೆ: ಮಅನಿ/ರಾ.ಗಾ.ವ.ನಿ.ನಿ./ವಸತಿ/05/2021-22, ದಿನಾಂಕ:-26-12-2023ರನ್ವಯ ರಾಜೀವ್ ಗಾಂಧಿ ವಸತಿ ನಿಗಮ ನಿಯಮಿತ ಇವರಿಗೆ ಬಿಡುಗಡೆ ಮಾಡಲಾಗಿದೆ.
4. ರಾಜ್ಯದಲ್ಲಿ ಇದುವರೆಗೆ 4981 ಲಿಂಗತ್ವ ಅಲ್ಪಸಂಖ್ಯಾತರಿಗೆ ಗುರುತಿನ ಚೀಟಿಗಳನ್ನು ಜಿಲ್ಲಾಧಿಕಾರಿಯವರಿಂದ ನೀಡಲಾಗಿದೆ.
5. ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮದ ಮೂಲಕ 2012-13 ನೇ ಸಾಲಿನಿಂದ ಲಿಂಗತ್ವ ಅಲ್ಪಸಂಖ್ಯಾತರ ಪುನರ್ವಸತಿ ಯೋಜನೆಯನ್ನು ಅನುಷ್ಠಾನಗೊಳಿಸಲಾಗುತ್ತಿದ್ದು, ಸ್ವಯಂ ಉದ್ಯೋಗ ಕೈಗೊಳ್ಳಲು ರೂ.30,000/-ಗಳ ಪ್ರೋತ್ಸಾಹಧನವನ್ನು ನೀಡಲಾಗುತ್ತಿದೆ. 2012-13 ರಿಂದ 2024-25ನೇ ಸಾಲಿನವರೆಗೆ ಒಟ್ಟು 10,210 ಲಿಂಗತ್ವ ಅಲ್ಪಸಂಖ್ಯಾತರಿಗೆ ಆರ್ಥಿಕ ಸೌಲಭ್ಯ ನೀಡಲಾಗಿದೆ. ಪ್ರಸಕ್ತ ಸಾಲಿನಲ್ಲಿ ಅರ್ಜಿಗಳನ್ನು ಸ್ವೀಕರಿಸಲಾಗಿದೆ.
6. ಉದ್ಯೋಗಿನಿ ಯೋಜನೆ ಯಡಿಯಲ್ಲಿ ಲಿಂಗತ್ವ ಅಲ್ಪಸಂಖ್ಯಾತರಿಗೆ ತರಬೇತಿ ಹಾಗೂ ಸ್ವಯಂ ಉದ್ಯೋಗಕ್ಕಾಗಿ ರೂ.3.00 ಲಕ್ಷದವರೆಗೆ ಬ್ಯಾಂಕ್‌ನಿಂದ ಸಾಲ ನೀಡುವ ಹಾಗೂ ಶೇಕಡ 30 ರಷ್ಟು ಸಹಾಯಧನ ನೀಡುವ ಯೋಜನೆಯಿದ್ದು, ಪ್ರಸಕ್ತ ಸಾಲಿನಲ್ಲಿ ಭೌತಿಕ ಗುರಿ 93 ಆಗಿರುತ್ತದೆ. ಅರ್ಜಿಗಳನ್ನು ಆಹ್ವಾನಿಸಿದ್ದು, ಅರ್ಜಿಗಳನ್ನು ಸ್ವೀಕರಿಸಲು ಕೊನೆಯ ದಿನಾಂಕ:15.01.2026 ಆಗಿರುತ್ತದೆ.
7. 2024-25 ನೇ ಸಾಲಿನಿಂದ ಸವಿರುಚಿ ಕ್ಯಾಂಟಿನ್ ಯೋಜನೆಯ ಸಂಚಾರಿ ಕ್ಯಾಂಟಿನ್ ಅನ್ನು ಪ್ರಾಯೋಗಿಕವಾಗಿ ಬೆಂಗಳೂರು ನಗರದಲ್ಲಿನ ಲಿಂಗತ್ವ ಅಲ್ಪಸಂಖ್ಯಾತರಿಂದ ನಡೆಸಲು ಕ್ರಮವಹಿಸಲಾಗಿದೆ.
8. 2022-23 ನೇ ಸಾಲಿನಲ್ಲಿ ಉಡುಪಿ ಜಿಲ್ಲೆಯಲ್ಲಿ ಲಿಂಗತ್ವ ಅಲ್ಪಸಂಖ್ಯಾತರು ಸ್ವ-ಉದ್ಯೋಗ ಕೈಗೊಳ್ಳಲು ಅಡಿಕೆ ಹಾಳೆ ತಯಾರಿಕಾ ಘಟಕವನ್ನು ಗುಂಪು ಚಟುವಟಿಕೆಯಡಿ ಸ್ಥಾಪಿಸಲಾಗಿದೆ.
9. 2023-24ನೇ ಸಾಲಿನಲ್ಲಿ ಗುಂಪು ಚಟುವಟಿಕೆಯಡಿ ಚಿತ್ರದುರ್ಗ ಜಿಲ್ಲೆಯ ಲಿಂಗತ್ವ ಅಲ್ಪಸಂಖ್ಯಾತರು ಸ್ವ-ಉದ್ಯೋಗ ಕೈಗೊಳ್ಳಲು ಮೇಕೆ ಮತ್ತು ಕೋಳಿ ಸಾಕಾಣಿಕಾ ಘಟಕವನ್ನು ಸ್ಥಾಪಿಸಲಾಗಿದೆ.
10. ಲಿಂಗತ್ವ ಅಲ್ಪಸಂಖ್ಯಾತರು ಖಿನ್ನತೆ, ಕಳಂಕ ತಾರತಮ್ಯ ಹಾಗೂ ಸರ್ಕಾರದಿಂದ ಸಿಗುವ ಸೇವಾ ಸೌಲಭ್ಯಗಳ ಮಾಹಿತಿ ಪಡೆಯಲು Transgender Toll Free ಯನ್ನು ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮದ ಕೇಂದ್ರ ಕಛೇರಿಯಲ್ಲಿ ಅಳವಡಿಸಲಾಗಿದೆ.

ಈ ಮೇಲ್ಕಂಡ ಯೋಜನೆಗಳನ್ನು ಹಾಗೂ ಸೌಲಭ್ಯಗಳನ್ನು ಲಿಂಗತ್ವ ಅಲ್ಪಸಂಖ್ಯಾತರನ್ನು ಸಮಾಜದ ಮುಖ್ಯವಾಹಿನಿಗೆ ತರಲು ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮದಿಂದ ಅನುಷ್ಠಾನಗೊಳಿಸಲಾಗುತ್ತಿದೆ.

ಸಂಖ್ಯೆ: ಡಬ್ಲ್ಯೂಸಿಡಿ 37 ಡಬ್ಲ್ಯೂಡಿಸಿ 2026

(ಲಕ್ಷ್ಮೀ ಆರ್. ಹೆಬ್ಬಾಳ್ಕರ್)
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ
ವಿಕಲಚೇತನರ ಮತ್ತು ಹಿರಿಯ ನಾಗರೀಕರ
ಸಬಲೀಕರಣ ಸಚಿವರು